ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್, ಬೆಂಗಳೂರು-86.

# ದಿನಾಂಕ:-01-10-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/51/2022-23 ದಿನಾಂಕ:30-09-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಕೇಶವ ಮೂರ್ತಿ | ಸಹಾಯಕ ನಿರ್ದೇಶಕರು ನಗರ ಯೋಜನೆ, ಬಿ.ಬಿ.ಎಂ.ಪಿ |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರರು, ವಾರ್ಡ-67 |
| 3. | ಶ್ರೀ. ಆಕಾಶ್ | ವಾರ್ಡ್ ಸಮಿತಿ ಸದಸ್ಯರು. |
| 4. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 5. | ಶ್ರೀ. ದಿಲೀಪ್ | ವಾರ್ಡ್ ಮಾರ್ಷಲ್, ವಾರ್ಡ್ -67. |
| 6. | ಶ್ರೀ. ಲೋಕೇಶ್ | ಬೀದಿ ನಾಯಿಗಳ ನಿರ್ವಹಣೆ. |
| 7. | ಶ್ರೀ. ಗಿರೀಶ್. ಬಿ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-1. |
| 8. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಖೆ, ಮೇಸ್ತ್ರೀ. |
| 9. | ಶ್ರೀ. ಶ್ರೀನಿವಾಸ್ ಎನ್ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲೂ-2. |
| 10. | ಶ್ರೀ. ಎಚ್ ರಮೇಶ್. | ಕಿರಿಯ ಅಭಿಯಂತರರು, ಬೆಸ್ಕಂ |
| 11. | ಶ್ರೀ. ಅನಂದ ಮೂರ್ತಿ. | ಸಹಾಯಕ ಅಭಿಯಂತರರು, ಎನ್-1 ಉಪವಿಭಾಗ ಬೆಸ್ಕಂ |
| 12. | ಶ್ರೀಮತಿ. ಕನಕಾಂಬ. | ವಾರ್ಡ್ ನಾಗರೀಕರು. |
| 13. | ಶ್ರೀ. ಗುರುಮೂರ್ತಿ | ಘ.ತ್ಯಾನಿ, ಸೂಪರ್‌ವೈಸರ್. |
| 14. | ಸಹಾಯಕ ಅಭಿಯಂತರರು, ಬೋರ್ವೆಲ್ ನಿರ್ವಹಣೆ. | ಗೈರು ಹಾಜರಿ. |
| 15. | ಕಿರಿಯ ಆರೋಗ್ಯ ಪರೀವಿಕ್ಷಕರು. | ಗೈರು ಹಾಜರಿ. |
| 16. | ಮಲ್ಲೇಶ್ವರಂ ಸಂಚಾರಿ ಪೊಲೀಸ್ ಠಾಣೆ. | ಗೈರು ಹಾಜರಿ. |
| 17. | ಮಹಾಲಕ್ಷ್ಮೀಪುರಂ ಪೊಲೀಸ್ ಠಾಣೆ. | ಗೈರು ಹಾಜರಿ. |



Scanned by CamScanner

| | | |
|---|---|---|
| 18. | ಸುಬ್ರಮಣ್ಯನಗರ ಪೊಲೀಸ್ ಠಾಣೆ. | ಗೈರು ಹಾಜರಿ. |
| 19. | ಕಂದಾಯ ಪರೀವಿಕ್ಷಕರು. | ಗೈರು ಹಾಜರಿ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾಹತನಾಡಿ ಸೆಪ್ಟೆಂಬರ್ ಮಾಹೆಯ ದಿ:~~01/09~~/2022 01/10/2022 ರಂದು ಬೆಳ್ಳಿಗೆ 9:30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾಹತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

| | |
|---|---|
| ಶ್ರೀ. ಆಕಾಶ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ 1ನೇ ಬ್ಲಾಕ್ ರಾಜಾಜಿನಗರದಲ್ಲಿ ಒಣಗಿರುವ ಮರಗಳ ಟ್ರೀಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಕೇಶವಮೂರ್ತಿ<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಅರಣ್ಯ ಇಲಾಖೆ ಸಿಭ್ಭಂಧಿ ಸಭೆಗೆ ಗೈರು ಹಾಜರಿದ್ದು ದೂರವಾಣಿ ಮೂಖೇನ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಕೇಶವಮೂರ್ತಿ<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸಭೆಯ ವಾಟ್ಸ್ ಆಫ್ ಗುಂಪಿನಲ್ಲಿ ಬೀದಿ ದೀಪದ ಸಮಸ್ಯೆಯ ಬಗ್ಗೆ ಹೆಚ್ಚು ದೂರುಗಳನ್ನು ವಾರ್ಡ್ ಸಮಿತಿ ಸದಸ್ಯರು ತಿಳಿಸುತ್ತಿದ್ದು ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರ ಸಿಭ್ಭಂಧಿ ತುರ್ತಾಗಿ ಎಲ್ಲಾ ಬೀದಿ ದೀಪಗಳ ದೂರನ್ನು ಸರಿಪಡಿಸಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನಲ್ಲಿ ಹಲವಾರು ಕಡೆ ಮನೆಯ ಮಾಲೀಕರು ಡೆಬ್ರೀಸ್ ಅನ್ನು ಮನೆಯ ಮುಂದೆ ಹಾಕಿ ತೆರವುಗೋಳಿಸಿರುವುದಿಲ್ಲ ಆದ್ದರಿಂದ ಸದರಿ ಮನೆಯವರಿಗೆ ವಾರ್ಡ್‌ನ ಮಾರ್ಷಲ್ ದಂಡ ವಿಧಿಸಲು ಸೂಚಿಸಿದರು. |
| ಶ್ರೀ. ದಿಲೀಪ್<br>ವಾರ್ಡ್ ಮಾರ್ಷಲ್, ವಾರ್ಡ್–67. | ವಾರ್ಡ್‌ನ ಸಹಾಯಕ ಅಭಿಯಂತರರು ಸೂಚಿಸಿರುವಂತೆ ಮನೆಯ ಮಾಲೀಕರಿಗೆ ದಂಡ ವಿಧಿಸುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀಮತಿ. ಗಂಗಾಂಬಿಕ<br>ವಾರ್ಡ್ ನಾಗರೀಕರು. | ವಾರ್ಡ್‌ನ 1ನೇ 'ಸಿ' ಅಡ್ಡರಸ್ತೆಯಲ್ಲಿ ರಸ್ತೆಗೆ ಹಂಪ್ಸ್ ಹಾಕಿದ್ದಾರೆ, ಭಾರಿ ವಾಹನಗಳು ರಸ್ತೆಯಲ್ಲಿ ಚಲಿಸುವಾಗ ಅಕ್ಕ ಪಕ್ಕದ ಮನೆಯವರಿಗೆ ತುಂಬ ಶಬ್ದವಾಗುತ್ತದೆ, ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಕೇಶವಮೂರ್ತಿ<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರು ಸದರಿ ದೂರಿಗೆ ಸಂಭಂದಿಸಿದಂತೆ ಸ್ಥಳ ಪರಿಶೀಲಿಸಿ ಕ್ರಮವಹಿಸಲು ಸೂಚಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸುವುದಾಗಿ ತಿಳಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀಮತಿ. ಗಂಗಾಂಬಿಕ ವಾರ್ಡ್ ನಾಗರೀಕರು. | ವಾರ್ಡ್‌ನ 1ನೇ 'ಸಿ' ಅಡ್ಡರಸ್ತೆ ರಾಜಾಜಿನಗರದಲ್ಲಿ ಟ್ರಾನ್ಸ್‌ಫಾರ್ಮರ್ ಹತ್ತಿರ ಮಣ್ಣು ತೆರವುಗೊಳಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ 1ನೇ 'ಸಿ' ಅಡ್ಡರಸ್ತೆ ರಾಜಾಜಿನಗರದಲ್ಲಿ ಟ್ರಾನ್ಸ್‌ಫಾರ್ಮರ್ ಹತ್ತಿರ ಮಣ್ಣು ತೆರವುಗೊಳಿಸಲು ಬೆಸ್ಕಂ ಸಿಬ್ಬಂದಿಗೆ ತಿಳಿಸಿದರು. |
| ಶ್ರೀ. ದಿಲೀಪ್ ವಾರ್ಡ್ ಮಾರ್ಷಲ್, ವಾರ್ಡ್–67. | ವಾರ್ಡ್‌ನ ಮಹಾಲಕ್ಷ್ಮೀಲೇಔಟ್ ಪೋಲಿಸ್ ಠಾಣೆಯ ಎದುರು ಆಟದ ಮೈದಾನದಲ್ಲಿ ಲೈಟ್ ಇರುವುದಿಲ್ಲ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ್–67 | ವಾರ್ಡ್‌ನ ಮಾರ್ಷಲ್ ರವರ ದೂರಿಗೆ ಸಂಭಂದಿಸಿದಂತೆ ಲೈಟ್ ಸರಿಪಡಿಸಲು ದೂರವಾಣಿ ಮೂಲಕ ವಿದ್ಯುತ್ ಗುತ್ತಿಗೆದಾರರಿಗೆ ತಿಳಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Ravi

**ಕಾರ್ಯದರ್ಶಿ ಹಾಗೂ**
**ಸಹಾಯಕ ಅಭಿಯಂತರರು, ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

1/10/22

**ಅಧ್ಯಕ್ಷರು ಹಾಗೂ**
**ನೋಡಲ್ ಅಧಿಕಾರಿಗಳು ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**



ಪು.ತಿ.ನೋ.

Scanned by CamScanner